ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಕೃಷಿ ಉತ್ಪನ್ನ ಸಹಕಾರ ಸಂಘದ ಕಾಲಂ 64ರ ಅಡಿಯಲ್ಲಿ ವಿಚಾರಣೆ ಕುರಿತು

ಶ್ರೀ ಹೆಚ್. ಎಂ. ರೇವಣ್ಣ(ವಿಧಾನಸಭೆಯಿಂದ ಚುನಾಯಿತರಾದವರು):-

235 (1797) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ಕೃಷಿ ಉತ್ಪನ್ನ ಸಹಕಾರ ಸಂಘದ ಮೇಲೆ ಸಹಕಾರ ಸಂಘ ಕಾಯ್ದೆ 64ರ ಅಡಿಯಲ್ಲಿ ವಿಚಾರಣೆಯು ಕ್ರಮ ಬದ್ದವಾಗಿ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಾಗಡಿ ತಾಲ್ಲೂಕು, ಮರಿಕುಪ್ಪೆ ಕೃಷಿ ಪತ್ತಿನ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಮತ್ತು ಸಿಬ್ಬಂದಿ ನೇಮಕ ಸಹಕಾರ ಕಾಯ್ದೆ 17 ಮತ್ತು 18 ರಂತೆ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಮರಿಕುಪ್ಪೆ ಹಾಲು ಉತ್ಪಾದಕರ ಸಂಘದ ಹಾಲು ಪರೀಕ್ಷಕರನ್ನು ನಿವೃತ್ತಿಯ 2 ವರ್ಷಗಳ ಅವಧಿಗೆ ನಿವೃತ್ತಿಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು ?